ದಿನಾಂಕ: 27.09.2018 ರಂದು ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಉಪ ಕಾರ್ಯದರ್ಶಿ (ಅ) ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರರು ರವರೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.

*********

ನಿರ್ದೇಶಕರು, ಗ್ರಾಮ ವಿಕಾಸ ರವರು ಸಭೆಯ ಅಧ್ಯಕ್ಷತೆ ವಹಿಸಿದ್ದ ಮಾನ್ಯ ಸಚಿವರು. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರಿಗೆ ಇಲಾಖಾ ಪರವಾಗಿ ಸ್ವಾಗತವನ್ನು ಕೋರಿದರು. ಸಭೆಗೆ ಆಗಮಿಸಿದ್ದ ಪ್ರಧಾನ ಕಾರ್ಯದರ್ಶಿಗಳು. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇಲಾಖಾ ಹಿರಿಯ ಅಧಿಕಾರಿಗಳು, ಇಲಾಖೆಯ ಎಲ್ಲಾ ಶಾಖೆಯ ನಿರ್ದೇಶಕರು, ಮುಖ್ಯಸ್ಥರುಗಳು, ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪ ಕಾರ್ಯದರ್ಶಿಗಳು(ಅ) ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರರುಗಳು ಹಾಗೂ ಇತರೆ ಅಧಿಕಾರಿಗಳಿಗೂ ಸಭೆಗೆ ಸ್ವಾಗತಿಸಿ, ಸಭೆ ಪ್ರಾರಂಭದ ಮುನ್ನ ಸಭೆಯನ್ನು ಉದ್ದೇಶಿಸಿ ಪ್ರಾಸ್ತಾವಿಕ ನುಡಿಗಳನ್ನಾಡಲು ಪ್ರಧಾನ ಕಾರ್ಯದರ್ಶಿಗಳಿಗೆ ವಿನಂತಿಸಿದರು.

ಪ್ರಧಾನ ಕಾರ್ಯದರ್ಶಿಗಳು ಸಭೆಯನ್ನುದ್ದೇಶಿಸಿ. ಸಭೆಯ ಅಧ್ಯಕ್ಷತೆ ವಹಿಸಿದ್ದ ಮಾನ್ಯ ಸಚಿವರಿಗೆ ಮತ್ತೊಮ್ಮೆ ಸಭೆಗೆ ಸ್ವಾಗತಿಸಿದರು. ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಪ್ರತಿಯೊಂದು ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಮಾನ್ಯ ಸಚಿವರ ಮಾರ್ಗದರ್ಶನದಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಮ್ಮೊಂದಿಗೆ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಾರ್ಯೋನ್ಮುಖರಾಗಿ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು. ವಿಷಯಸೂಚಿಯನುಸಾರ ಪರಿಶೀಲನೆ ಕೈಗೊಳ್ಳಲು ಪ್ರಧಾನ ಕಾರ್ಯದರ್ಶಿಗಳು ಮಾನ್ಯ ಸಚಿವರಲ್ಲಿ ಮನವಿಸಿದರು.

ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಮೊದಲಿಗೆ ಸಭೆಯನ್ನುದ್ದೇಶಿಸಿ ಮಾತನಾಡಿ, ಕಳೆದ ಸಭೆಯಲ್ಲಿ ಕೈಗೊಂಡ ನಿರ್ಣಯಗಳು ಫಲಪ್ರದವಾಗಿ ಕಾರ್ಯರೂಪಕ್ಕೆ ಬಂದಲ್ಲಿ ಮಾತ್ರ ಇಂತಹ ಪರಿಶೀಲನಾ ಸಭೆಗಳು ಉಪಯುಕ್ತವಾಗುತ್ತವೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಅನುಷ್ಠಾನಗೊಳಿಸುತ್ತಿರುವ ಪ್ರತಿಯೊಂದು ಯೋಜನೆಗಳ ಕೂಲಂಕಷ ಪರಿಶೀಲನೆ ನಡೆಸಿ ಸಭೆಯು ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿತು.

## ಮಹಾತ್ಮ ಗಾಂದಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಎಂ.ಜಿ.ಎನ್.ಆರ್.ಇ.ಜಿ.ಎ):

1. ಬೇರೆ ರಾಜ್ಯಗಳಿಗೆ ಹೋಲಿಸಿದಾಗ ನಮ್ಮ ರಾಜ್ಯದಲ್ಲಿ ಈ ಯೋಜನೆ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ ಹಾಗೂ ಯೋಜನೆಯ ಸಂಪೂರ್ಣ ಲಾಭ ಪಡೆಯುವಲ್ಲಿ ಹಿಂದುಳಿದಿರುತ್ತೇವೆ, ನೆರೆಯ ತೆಲಂಗಾಣ, ಆಂದ್ರ ಪ್ರದೇಶ, ತಮಿಳುನಾಡು, ಮಧ್ಯ ಪ್ರದೇಶ ಹಾಗೂ ಜಾರ್ಖಂಡ್ ರಾಜ್ಯಗಳಲ್ಲಿ 3-4 ಪಟ್ಟು ಹೆಚ್ಚಿನ ಅನುದಾನ ಬಳಕೆಯಾಗುತ್ತಿದ್ದು, ಅಗಾಧವಾದ ಉದ್ಯೋಗ ಸೃಷ್ಟಿಸಲು ಅವಕಾಶವಿದ್ದರೂ ನಮ್ಮ ರಾಜ್ಯದಲ್ಲಿ ಪ್ರಗತಿ ಅಷ್ಟಾಗಿ

ತೃಪ್ತಿಕರವಾಗಿಲ್ಲ ಎಂದು ಮಾನ್ಯ ಸಚಿವರು ಅಸಂತೃಪ್ತಿ ವ್ಯಕ್ತಪಡಿಸಿದರು. ಜೂನ್ 2018ರ ಮಾಹೆಯಲ್ಲಿ ನಡೆಸಿದ ಸಭೆ ಹಾಗೂ ವೀಡಿಯೋ ಸಂವಾದಗಳಲ್ಲಿ ಇತರೆ ವಲಯಗಳನ್ನು ಚಟುವಟಿಕೆಗಳೊಂದಿಗೆ ಒಗ್ಗೂಡಿಸಿ ಯೋಜನೆ ಅನುಷ್ಠಾನಗೊಳಿಸಬೇಕಾದ ಬಗ್ಗೆ ಈಗಾಗಲೇ ಸವಿಸ್ತಾರವಾಗಿ ತಿಳಿಸಲಾಗಿದೆ. ಇತರೆ ಇಲಾಖಾ ಚಟುವಟಿಕೆಗಳಾದ ಕೃಷಿ, ತೋಟಗಾರಿಕೆ, ಅರಣ್ಯ, ಪ್ರವಾಸೋದ್ಯಮ, ರೇಷ್ಮೆ, ಮೀನುಗಾರಿಕೆ, ಜಲಾನಯನ ಅಭಿವೃದ್ಧಿ, ಇತರೆ ಇಲಾಖೆಗಳನ್ನು ಒಗ್ಗೂಡಿಸಿ ಯೋಜನೆಯನ್ನು ಅನುಷ್ಠಾನಗೊಳಿಸಿದಲ್ಲಿ, ಸದರಿ ಯೋಜನೆಯಡಿ ಹೆಚ್ಚಿನ ಉದ್ಯೋಗವನ್ನು ಹಾಗೂ ಫಲಾನುಭವಿಗಳ ಆಸ್ತಿಗಳನ್ನು ಸೃಜಿಸಬಹುದಾಗಿದ್ದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹೆಚ್ಚು ಕಾರ್ಯತತ್ಪರರಾಗಿ ನಿಯಮಿತವಾಗಿ ಪರಿಶೀಲನಾ ಸಭೆಗಳನ್ನು ನಡೆಸಿ ಕ್ರಮವಹಿಸಲು ಸೂಚಿಸಲಾಯಿತು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಸಂಬಂಧಪಟ್ಟ ಇಲಾಖೆಗಳೊಂದಿಗೆ ಪರಿಶೀಲನೆ ನಡೆಸಿ ಇತ್ಯಾರ್ಥವಾಗದ ಸಮಸ್ಯೆಗಳಿದ್ದಲ್ಲಿ, ಅವುಗಳನ್ನು ಆಯುಕ್ತರು, ಗ್ರಾಮೀಣಾಭಿವೃದ್ಧಿರವರ ಗಮನಕ್ಕೆ ತಂದು ಪರಿಹಾರಗಳನ್ನು ಕಂಡುಕೊಳ್ಳುವುದು.

3. ಪ್ರಸ್ತುತ ಸಾಲಿನಲ್ಲಿ 8.50 ಕೋಟಿ ಮಾನವ ದಿನಗಳ ಸೃಜನೆ ಗುರಿ ಹೊಂದಿದ್ದು, ಈವರೆವಿಗೂ 3.36 ಕೋಟಿ ಮಾನವ ದಿನಗಳ ಸೃಜನ ಸಾಧನೆಯಾಗಿದ್ದು, ಸದರಿ ಯೋಜನೆಯಡಿ ರಾಷ್ಟ್ರಮಟ್ಟದಲ್ಲಿ ಶೇ.53ರಷ್ಟು ಸಾಧನೆಯಾಗಿದ್ದು, ಇದಕ್ಕೆ ಹೋಲಿಸಿದ್ದಲ್ಲಿ ನಮ್ಮ ರಾಜ್ಯದ ಪ್ರಗತಿ ನಿರಾಶಾದಾಯಕವಾಗಿರುತ್ತದೆ. ರಾಜ್ಯದ 10 ಜಿಲ್ಲೆಗಳಲ್ಲಿ ಪ್ರಗತಿಯು ಶೇ.30ಕ್ಕಿಂತ ಕಡಿಮೆಯಿದ್ದು, ಈ ಬಗ್ಗೆ ಆದ್ಯತೆ ಮೇರೆಗೆ ಗಮನಹರಿಸಿ ಅಗತ್ಯ ಕ್ರಮಕೈಗೊಳ್ಳುವುದು.

4. ಮಾನ್ಯ ಸಚಿವರು ವಸತಿ ನಿರ್ಮಾಣ, ತೋಟಗಾರಿಕೆ ಬೆಳೆ ಬೆಳೆಯಲು, ರೇಷ್ಮೆ ಕೃಷಿಗೆ, ಕುರಿ ದನ ದೊಡ್ಡಿ ನಿರ್ಮಾಣ, ಶಾಲಾ ಕಾಂಪೌಂಡ್ ನಿರ್ಮಾಣ, ಶಾಲಾ ಆಟದ ಮೈದಾನ ಅಭಿವೃದ್ಧಿ, ಚೆಕ್‌ಡ್ಯಾಂ ನಿರ್ಮಾಣ ಮುಂತಾದ ಚಟುವಟಿಕೆಗಳಿಗೆ ನರೇಗಾದಡಿ ಅನುದಾನ ಬಳಸಲು ಇರುವ ವಿಫುಲ ಅವಕಾಶವನ್ನು ಬಳಕೆ ಮಾಡುವುದು.

5. ಸದರಿ ಯೋಜನೆಯಡಿ ಮಾನವ ದಿನಗಳನ್ನು ಸೃಜಿಸುವುದಲ್ಲದೇ ಸುಸ್ಥಿರ ಆಸ್ತಿಗಳನ್ನು ಸಹ ಜೊತೆ ಜೊತೆಯಾಗಿ ಸೃಷ್ಟಿಸಲು ಕಾಮಗಾರಿಗಳನ್ನು ಜೋಡಣೆ ಮಾಡಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಕ್ರಮ.

6. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಇರುವ ಸವಲತ್ತು ಮತ್ತು ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಬಹುದೆಂಬುದರ ಬಗ್ಗೆ ಗ್ರಾಮೀಣ ಜನರಿಗೆ ಸಂಪೂರ್ಣ ಮಾಹಿತಿ/ತಿಳುವಳಿಕೆ ಇಲ್ಲದಿರುವ ಬಗ್ಗೆ ತಮ್ಮ ಪ್ರವಾಸದ ಸಮಯದಲ್ಲಿ ಕಂಡು ಬಂದಿದ್ದು, ಸದರಿ ಯೋಜನೆಯ ಐಇಸಿ ಅನುದಾನದಿಂದ ಪ್ರಚಾರ ಕಾರ್ಯಕ್ಕೆ ಒತ್ತು ನೀಡುವುದು.

7. GEO-Tagging ನಲ್ಲಿ ಹಲವು ಜಿಲ್ಲೆಗಳು ಹಿಂದುಳಿದಿದ್ದು, ಸದರಿ ವಿಷಯದಡಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡು, ಸರ್ಕಾರಕ್ಕೆ ವರದಿ ಸಲ್ಲಿಸುವುದು.

8. ಕಾಲಮಿತಿಯೊಳಗೆ ಎಂ.ಜಿ.ಎನ್.ಆರ್.ಇ.ಜಿ.ಎ ಯೋಜನೆಯಡಿ ಫಲಾನುಭವಿಗಳಿಗೆ ಕೂಲಿ ವೇತನವನ್ನು ವಿತರಿಸದಿರುವುದನ್ನು ಸಭೆಯು ಗಂಭೀರವಾಗಿ ಪರಿಗಣಿಸಿ ಈ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದು.

(ಕ್ರಮ: ಆಯುಕ್ತರು /ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

<u>ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ:</u>

9. ಗ್ರಾಮೀಣ ನೀರು ಸರಬರಾಜು ಯೋಜನೆಯಡಿ ಸುಮಾರು 7 ಜಿಲ್ಲೆಗಳಲ್ಲಿ ಪ್ರಗತಿ ಅತ್ಯಂತ ನಿರಾಶದಾಯಕವಾಗಿದ್ದು, ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡು ಪ್ರಗತಿ ಸಾಧಿಸುವುದು.

10. ಪ್ರತಿ ದಿನ ಐಎಂಐಎಸ್ ಮತ್ತು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಪ್ರಗತಿ ಅಳವಡಿಸಿರುವುದನ್ನು ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ ವರದಿಸಲು ತಿಳಿಸಲಾಯಿತು.

11. ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ನವೆಂಬರ್ 2018 ರ ಅಂತ್ಯಕ್ಕೆ ರೂ. 700.00 ಕೋಟಿ ಪ್ರಗತಿ ಸಾಧಿಸಲು ಕ್ರಮ ಕೈಗೊಳ್ಳುವುದು.

12. ಯೋಜನೆಯಡಿ ಸಾಕಷ್ಟು ಅನುದಾನ ಲಭ್ಯವಿದ್ದರೂ ಪ್ರಗತಿ ಸಾಧಿಸದೆ ಇರುವುದನ್ನು ಸಭೆ ಗಂಭೀರವಾಗಿ ಪರಿಗಿಣಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಾರ್ಯಪಾಲಕ ಇಂಜಿನಿಯರ್, ಗ್ರಾನೀಸ ಇವರುಗಳ ಸಭೆ ಕರೆದು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಂಡು, ಸರ್ಕಾರಕ್ಕೆ ವರದಿ ಸಲ್ಲಿಸುವುದು.

13. ಹೊಸ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸುವುದು ಮತ್ತು ಎಲ್ಲಾ ಕಾಮಗಾರಿಗಳನ್ನು ಮಾರ್ಚ್ 2019 ರೊಳಗೆ ಪೂರ್ಣಗೊಳಿಸಿ, ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಸಾಧಿಸಲು ಕ್ರಮ ಕೈಗೊಳ್ಳುವುದು.

14. ಟ್ಯಾಂಕರ್‌ಗಳಲ್ಲಿ ಕುಡಿಯುವ ನೀರು ಸರಬರಾಜು ಮಾಡುವ ಬದಲಿಗೆ ಶಾಶ್ವತ ಕುಡಿಯುವ ನೀರು ಒದಗಿಸುವ ಯೋಜನೆಗಳಿಗೆ ಒತ್ತು ನೀಡಲು ಮಾನ್ಯ ಸಚಿವರು ಸೂಚಿಸಿದರು.

2016-17 ನೇ ಸಾಲಿನ ಕಾಮಗಾರಿಗಳು ಈ ಸಾಲಿಗೂ ಮುಂದುವರೆದಿದ್ದಾಗ್ಯೂ ಬಿಲ್ಲುಗಳ ಪಾವತಿ ಆಗಿಲ್ಲದಿರುವುದರ ಬಗ್ಗೆ ಮಾನ್ಯ ಸಚಿವರು ಅಸಮಾಧಾನ ವ್ಯಕ್ತಪಡಿಸಿ, IMIS, ಗಾಂಧಿ ಸಾಕ್ಷಿ ಕಾಯಕದಲ್ಲಿ ಮಾಹಿತಿ ದಾಖಲಿಸಿ ಕೂಡಲೇ ಪಾವತಿಗೆ ವ್ಯವಸ್ಥೆ ಮಾಡಲು ಕ್ರಮ ವಹಿಸುವುದು.

<u>ಶುದ್ಧ ಕುಡಿಯುವ ನೀರಿನ ಘಟಕಗಳು</u>

15. ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ತಿಗೆ ಸಂಬಂಧಿಸಿದಂತೆ ದುರಸ್ತಿಗೊಳಿಸಲು ಕಳೆದ ಸಭೆಯಲ್ಲಿ ಸೂಚನೆ ನೀಡಿದ ಮೇರೆಗೆ ಹಲವು ಜಿಲ್ಲೆಗಳಲ್ಲಿ ದುರಸ್ತಿ ಕಾರ್ಯ ನಡೆದು ಶುದ್ಧ ಕುಡಿಯುವ ನೀರಿನ ಘಟಕಗಳು ಸುಸ್ಥಿತಿಯಲ್ಲಿರುವುದು ತಿಳಿದು ಬಂದಿರುತ್ತದೆ. ಆದರೆ ಸೂಕ್ತ ಪ್ರಚಾರವಿಲ್ಲದೇ ಕೈಗೊಂಡಿರುವ ಕ್ರಮವು

ಸಾರ್ವಜನಿಕವಾಗಿ ಸಾರ್ವಜನಿಕರಿಗೆ ತಿಳಿದು ಬರುತ್ತಿಲ್ಲ. ಆದ್ದರಿಂದ ಜನಪ್ರತಿನಿಧಿಗಳನ್ನು ಮತ್ತು ಸುದ್ದಿ ಮಾಧ್ಯಮಗಳನ್ನು ಬಳಕೆ ಮಾಡಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡುವುದು.

16. ಗ್ರಾಮೀಣ ಕುಡಿಯುವ ನೀರು ಸರಬರಾಜು ಹಾಗೂ ಕೆ.ಆರ್.ಐ.ಡಿ.ಎಲ್ ಕಾರ್ಯಪಾಲಕ ಇಂಜನಿಯರ್‌ಗಳೊಂದಿಗೆ ಸಮಾಲೋಚನೆ ನಡೆಸಿ ಎಲ್ಲಾ ಶುದ್ಧ ಕುಡಿಯುವ ನೀರು ಘಟಕಗಳ ಸಮರ್ಪಕ ಕಾರ್ಯನಿರ್ವಹಣೆಗೆ ಕ್ರಮ ವಹಿಸುವುದು.

17. ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಿಸುವ ಹೊಣೆಯನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ವಹಿಸಲು ಸೂಕ್ತ ಕ್ರಮ ವಹಿಸುವುದು.

18. ಪ್ರಸ್ತುತ ಚಾಲ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ನಾಣ್ಯಗಳನ್ನು ಹಾಕಿ ನೀರು ಸಂಗ್ರಹಿಸುವ ಬದಲಿಗೆ ಸ್ಮಾರ್ಟ್ ಕಾರ್ಡ್ ಜಾರಿಗೆ ತರುವಂತೆ ಹಾಗೂ ಆ ಮೂಲಕ ಸಂಗ್ರಹಿಸಲಾದ ಹಣವನ್ನು ಸದರಿ ಘಟಕಗಳ ನಿರ್ವಹಣೆಗೆ ಬಳಸಲು ಕ್ರಮ ವಹಿಸುವುದು.

<u>ಬಹುಗ್ರಾಮ ಕುಡಿಯುವ ನೀರಿನ ಯೋಜನೆ:</u>

19. ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯ ಅನುಷ್ಠಾನ ಕುರಿತಂತೆ ಸಾರ್ವಜನಿಕ ವಲಯದಲ್ಲಿ ಅನೇಕ ಟೀಕೆಗಳು ಕೇಳಿ ಬರುತ್ತಿದ್ದು, ಗ್ರಾಮ ಪಂಚಾಯತಿ ಹಂತದಲ್ಲಿ ಸಮರ್ಪಕವಾದ ನಿರ್ವಹಣೆಯಿಲ್ಲದೇ ಗ್ರಾಮೀಣ ಜನತೆಗೆ ಸದರಿ ಯೋಜನೆಯ ಉಪಯೋಗವನ್ನು ತಲುಪಿಸುವಲ್ಲಿ ಕೆಲವಡೆ ಸ್ಥಳೀಯ ಆಡಳಿತ ವಿಫಲಗೊಂಡಿರುವುದು ಕಂಡು ಬಂದಿರುತ್ತದೆ.

20. ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಗ್ರಾಮ ಪಂಚಾಯತಿಗಳಲ್ಲಿ ಆವರಿಸಲ್ಪಡುವ ಜನವಸತಿಗಳನ್ನು ಆಧರಿಸಿ ನಿರ್ವಹಣಾ ವೆಚ್ಚವನ್ನು ಸಂಗ್ರಹಿಸಲು ಕ್ರಮ.

21. ಸದರಿ ಯೋಜನೆಯಡಿ ಮುಕ್ತಾಯಗೊಂಡಿರುವ ಕಾಮಗಾರಿಗಳ ನಿರ್ವಹಣೆಯನ್ನು ಕೈಗೊಳ್ಳಲು ಹೊರಗುತ್ತಿಗೆ ಆಧಾರದ ಮೇಲೆ ಅರ್ಹ ಸಂಸ್ಥೆಗಳನ್ನು ನೇಮಕ ಮಾಡಲು ಕ್ರಮ ವಹಿಸುವುದು.

22. ಕೆಲವು ಜಿಲ್ಲೆಗಳಲ್ಲಿ ದೋಷಪೂರಿತ ವಿನ್ಯಾಸದ ಕಾರಣದಿಂದ ಮತ್ತು ಕೆಲವೆಡೆ ಜಲಮೂಲಗಳು ಅಲಭ್ಯವಾಗಿರುವುದರಿಂದ ಸದರಿ ಯೋಜನೆಯ ಸಮರ್ಪಕ ಅನುಷ್ಠಾನದಲ್ಲಿ ವ್ಯತ್ಯಯವಾಗಿರುವುದು ಸಭೆ ಮನಗಂಡಿತು ಹಾಗೂ ಸದರಿ ಸಮಸ್ಯೆ ಬಗ್ಗೆ ಅರ್ಹ ತಂತ್ರಜ್ಞರಿಂದ ಪರಿಹಾರ ಕೈಗೊಳ್ಳುವುದು.

(ಕ್ರಮ : ಆಯುಕ್ತರು / ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

ಸ್ವಚ್ಛ ಭಾರತ ಅಭಿಯಾನ:

23. ಸ್ವಚ್ಛ ಭಾರತ ಅಭಿಯಾನದಡಿ ಕೆಲವೊಂದು ಜಿಲ್ಲೆಗಳನ್ನು ಹೊರತು ಪಡಿಸಿ ಉಳಿದ ಜಿಲ್ಲೆಗಳು ಸಾಧಿಸಿರುವ ಪ್ರಗತಿಯ ಬಗ್ಗೆ ಮಾನ್ಯ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

24. ಸದರಿ ಯೋಜನೆಯಡಿ ಬೀದರ್, ವಿಜಯಪುರ, ರಾಯಚೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪ್ರಗತಿ ಬಹಳ ಕುಂಠಿತವಾಗಿದ್ದು, ನಿಗದಿಪಡಿಸಿರುವ ದಿನಾಂಕದೊಳಗೆ ಬೇಸ್ ಲೈನ್ ಸರ್ವೆಯನ್ನು ಆಧರಿಸಿ ಪ್ರಗತಿ ಸಾಧಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲು ಸೂಚಿಸಿದರು.

25. ಯೋಜನೆಯಡಿ ಸಾಧಿಸಿರುವ ಪ್ರಗತಿಯನ್ನು ಐ.ಎಂ.ಐಎಸ್ ತಂತ್ರಾಂಶದಲ್ಲಿ ಅಳವಡಿಸದಿದ್ದಲ್ಲಿ ಸಾಧಿಸಿರುವ ಪ್ರಗತಿಯನ್ನು ಕೇಂದ್ರ ಸರ್ಕಾರ ಪರಿಗಣಿಸುವುದಿಲ್ಲ ಹಾಗೂ ಅನುದಾನ ಬಿಡುಗಡೆಗೆ ಅಡಚಣೆಯುಂಟಾಗುತ್ತದೆ. ಆದ್ದರಿಂದ ಕಡ್ಡಾಯವಾಗಿ ಪ್ರಗತಿಯನ್ನು ಸದರಿ ತಂತ್ರಾಂಶದಲ್ಲಿ ಅಳವಡಿಸಲು ಸೂಚಿಸಲಾಯಿತು.

26. ಘನ ತ್ಯಾಜ್ಯ ವಿಲೇವಾರಿ ನಿರ್ವಹಣೆಯನ್ನು ಪ್ರತಿ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯಲ್ಲಿ ಹಸಿ ಕಸ ಮತ್ತು ಒಣ ಕಸ ವಿಗಂಡಣೆ ಮಾಡಿ ಹಸಿ ಕಸ ಸಂಸ್ಕರಣೆ ಮಾಡಿ ಗೊಬ್ಬರವನ್ನು ತಯಾರಿಸಿ ನೇರವಾಗಿ ಕೃಷಿ ಚಟುವಟಿಕೆಗಳಿಗೆ ಸದುಪಯೋಗವಾಗುವಂತೆ ಕ್ರಮ ಕೈಗೊಳ್ಳಲು ಮಾನ್ಯ ಸಚಿವರು ಸೂಚಿಸಿದರು.

27. ಗ್ರಾಮೀಣ ಜನತೆ ತಮ್ಮ ಪರಿಸರದಲ್ಲಿ ಸ್ವಚ್ಛತೆ ಕಾಪಾಡಲು ಐ.ಇ.ಸಿ ಚಟುವಟಿಕೆಗಳ ಮೂಲಕ ಅರಿವು ಮೂಡಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವೈಯಕ್ತಿಕ ಗಮನ ಹರಿಸುವುದು.

**(ಕ್ರಮ : ಆಯುಕ್ತರು / ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

ಪಂಚಾಯತ್ ರಾಜ್ ವಿಷಯಗಳು:

28. ಗ್ರಾಮ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸುವ ಬಿಲ್ ಕಲೆಕ್ಟರ್‌ಗಳಿಗೆ ಪ್ರತಿ ದಿನ ಗುರಿ ನಿಗದಿಪಡಿಸಿ ತೆರಿಗೆ ವಸೂಲಾತಿಯನ್ನು ಮಾಡಲು ಕ್ರಮ ಕೈಗೊಳ್ಳುವುದು.

29. ಗ್ರಾಮ ಪಂಚಾಯತಿಗಳು ತೆರಿಗೆ ವಸೂಲಾತಿಗೆ ಅಗತ್ಯ ಕ್ರಮ ಕೈಗೊಳ್ಳಬೇಕಾಗಿದ್ದು, ಪಂಚಾಯತಿ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಜವಾಬ್ದಾರರನ್ನಾಗಿ ಮಾಡಿ ತೆರಿಗೆ ವಸೂಲಾತಿಗೆ ಆದ್ಯತೆ ನೀಡುವುದು. ಈ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲನಾ ಸಭೆ ನಡೆಸುವುದು. ನಿಗಧಿತ ಗುರಿಯನ್ನು ತಲುಪದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವುದು ಇದರಿಂದ ತಮ್ಮದು "ಸ್ಥಳೀಯ ಸರ್ಕಾರ" ಎಂಬ ಭರವಸೆ ಮೂಡಿಸಲು ಸಹಾಯವಾಗುತ್ತದೆ ಎಂದು ಮಾನ್ಯ ಸಚಿವರು ಸಲಹೆ ನೀಡಿದರು.

30. ಹೊಸದಾಗಿ 50 ತಾಲ್ಲೂಕುಗಳು ರಚನೆಗೊಂಡಿದ್ದು, ತಾಲ್ಲೂಕು ಪಂಚಾಯತಿ ಕಚೇರಿಗಳು ಕಾರ್ಯನಿರ್ವಹಿಸಲು ಬಾಡಿಗೆ ಕಟ್ಟಡಗಳನ್ನು ಪಡೆದು ಕಾರ್ಯ ಪ್ರಾರಂಭಿಸಲು ತಗಲುವ ವೆಚ್ಚದ ಬಗ್ಗೆ ಪ್ರಸ್ತಾವನೆಗಳನ್ನು ಸಲ್ಲಿಸುವುದು.

31. ತಾಲ್ಲೂಕು ಪಂಚಾಯತ್ ಅನುದಾನದಡಿ ಕೈಗೊಳ್ಳುವ ಕಾಮಗಾರಿಗಳು ಪುನರಾವರ್ತನೆಯಾಗುತ್ತಿದ್ದು, ಇದನ್ನು ತಡೆಗಟ್ಟಲು ಕ್ರಮ ವಹಿಸುವುದು.

32. ಗ್ರಾಮ ಪಂಚಾಯತಿಗಳ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ನಿವೇಶನ ಲಭ್ಯವಿದ್ದರೂ ಕಾಮಗಾರಿ ಪ್ರಾರಂಭಿಸದಿರುವುದರ ಬಗ್ಗೆ ಸಭೆ ಮನಗಂಡು ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು.

33. ಗ್ರಾಮ ಪಂಚಾಯತಿಗಳ ಕಟ್ಟಡ ನಿರ್ಮಾಣಕ್ಕೆ HKRDB ಯಿಂದ ಅನುದಾನ ಬಿಡುಗಡೆಯಾಗಿರುವ ಬಗ್ಗೆ ಮಾಹಿತಿ ನೀಡಲು ತಿಳಿಸಲಾಯಿತು.

(ಕ್ರಮ : ನಿರ್ದೇಶಕರು ಪಂ.ರಾಜ್ I/ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

34. 14 ನೇ ಹಣಕಾಸಿನ ಆಯೋಗದ ಅನುದಾನದಡಿ ಕೈಗೊಳ್ಳ ಬೇಕಾದ ಕಾಮಗಾರಿಗಳಿಗೆ ಗ್ರಾಮ ಪಂಚಾಯತಿಗಳಿಂದ ಕ್ರಿಯಾ ಯೋಜನೆಗಳನ್ನು ದಿನಾಂಕ: 30.09.2018 ರೊಳಗೆ ಸಲ್ಲಿಸುವಂತೆ ಸೂಚಿಸಲಾಯಿತು.

(ಕ್ರಮ : ನಿರ್ದೇಶಕರು ಪಂ.ರಾಜ್ II/ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

<u>ಗ್ರಾಮೀಣ ರಸ್ತೆಗಳು</u>

<u>ಸುವರ್ಣ ಗ್ರಾಮ/ಗ್ರಾಮ ವಿಕಾಸ/ ಮುಖ್ಯ ಮಂತ್ರಿ ಗ್ರಾಮ ವಿಕಾಸ</u>

35. ಸುವರ್ಣ ಗ್ರಾಮ/ಗ್ರಾಮ ವಿಕಾಸ ಯೋಜನೆಯ ಗ್ರಾಮಗಳಲ್ಲಿ ಬಾಕಿಯಿರುವ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದು.
36. ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮಗಳಲ್ಲಿನ ಕ್ರಿಯಾ ಯೋಜನೆಗಳನ್ನು ಪಂಚಾಯತಿಗಳಿಂದ ತರಿಸಿಕೊಂಡು ಸಕಾಲದಲ್ಲಿ ಕಾಮಗಾರಿಗಳನ್ನು ಆರಂಭಿಸಲು ಕೂಡಲೇ ಕ್ರಮ ಕೈಗೊಳ್ಳುವುದು.

37. ಇದಕ್ಕಾಗಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೆಆರ್‌ಐಡಿಎಲ್, ಸಂಸ್ಥೆಗಳ ಸಂಬಂಧಿಸಿದ ಎಲ್ಲಾ ಕಾರ್ಯಪಾಲಕ ಇಂಜಿನಿಯರ್‌ಗಳು ಮತ್ತು ಸಂಬಂಧಪಟ್ಟ ಕ್ಷೇತ್ರಮಟ್ಟದ ಅಧಿಕಾರಿಗಳ ಸಭೆ ಕರೆದು ಸೂಕ್ತ ಕ್ರಮ ಕೈಗೊಂಡು ಪ್ರಗತಿ ಸಾಧಿಸುವುದು.

38. ಕಲ್ಬುರ್ಗಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈಗಾಗಲೇ ಗ್ರಾಮ ವಿಕಾಸ /ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಮಾರ್ಗಸೂಚಿಯಂತೆ ಆಯ್ಕೆಯಾಗಿದ್ದ ಗ್ರಾಮವನ್ನು

ಬದಲಾಯಿಸಲಾಗಿದ್ದು, ಇದರಿಂದ ಸಕಾಲದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

39. ಗ್ರಾಮ ವಿಕಾಸ / ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ಬಿಡುಗಡೆಮಾಡಿದ ಅನುದಾವನ್ನು ಗ್ರಾಮ ಪಂಚಾಯತಿ ಅಧ್ಯಕ್ಷರು ಚೆಕ್‌ಗಳಿಗೆ ಸಹಿ ಮಾಡುವಲ್ಲಿ ವಿಳಂಬಧೋರಣೆಯನ್ನು ಮಾಡಿದ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾಗಿರುವ ಕ್ರಮಕ್ಕೆ ಈಗ ನೀಡಿರುವ ಸುತ್ತೋಲೆಯ ಮೇರೆಗೆ ಎಂ.ಜಿ.ಎನ್.ಆರ್.ಇ.ಜಿ.ಎ ರೀತಿಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಧಿಕಾರವನ್ನು ಬದಲಾಯಿಸುವುದರ ಬಗ್ಗೆ ಇರುವ ತೊಡಕನ್ನು ಸರಿಪಡಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬಳ್ಳಾರಿ ಜಿಲ್ಲಾ ಪಂಚಾಯತಿಯವರು ತಿಳಿಸಿದರು. ಇದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಪ್ರಧಾನ ಕಾರ್ಯದರ್ಶಿಗಳು ಸೂಚಿಸಿದರು.

**(ಕ್ರಮ : ನಿರ್ದೇಶಕರು, ಗ್ರಾಮ ವಿಕಾಸ/ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

<u>ನಮ್ಮ ಗ್ರಾಮ ನಮ್ಮ ರಸ್ತೆ.</u>

40. ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ ಪ್ರಗತಿಯು ಆಗಸ್ಟ್ 2018 ರ ಅಂತ್ಯಕ್ಕೆ ಶೇ. 36 ರಷ್ಟಾಗಿದ್ದು, ಸದರಿ ಯೋಜನೆಯಡಿ ಹೆಚ್ಚಿನ ಪ್ರಗತಿಯನ್ನು ಸಾಧಿಸಲು ಹಾಗೂ ಪ್ರಗತಿ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ನಮೂದಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

41. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಯೋಜನೆಯಡಿ ಪರಿಶೀಲನಾ ಸಭೆಗಳನ್ನು ನಿಯಮಿತವಾಗಿ ನಡೆಸದೇ ಇರುವುದನ್ನು ಸಭೆ ಮನಗಂಡು ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಕಾಮಗಾರಿಗಳನ್ನು ಖುದ್ದು ಪರಿಶೀಲನೆಗೆ ಕ್ರಮ ವಹಿಸುವುದು.

42. ಯೋಜನೆಯಡಿ ಅವಶ್ಯವಿರುವ ಕಾಮಗಾರಿಗಳಿಗೆ ಅರಣ್ಯ ಇಲಾಖೆಯಿಂದ ಅನುಮತಿ ಪಡೆಯಲು ಕ್ರಮ ಕೈಗೊಳ್ಳುವುದು.

**(ಕ್ರಮ : ನಿರ್ದೇಶಕರು/ ಮುಖ್ಯ ಕಾರ್ಯಾಚರಣೆ ಅಧಿಕಾರಗಳು, ಕೆಆರ್‌ಆರ್‌ಡಿಎ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

<u>ನಬಾರ್ಡ್ ರಸ್ತೆಗಳು</u>

43. ನಬಾರ್ಡ್ ರಸ್ತೆಗಳು ಯೋಜನೆಯಡಿ ಪ್ರಗತಿಯು ಕುಂಠಿತವಾಗಿದ್ದು, ಸದರಿ ಯೋಜನೆಯಡಿ ಖಜಾನೆ-II ರ ಸಮಸ್ಯೆ ಬಗ್ಗೆ ಈ ಹಿಂದಿನ ಸಭೆಗಳಲ್ಲಿ ತಿಳಿಸಲಾಗಿದ್ದು, ಪ್ರಸ್ತುತ ಸಮಸ್ಯೆ ಬಗೆಹರಿದಿರುವುದರಿಂದ ಹೆಚ್ಚಿನ ಪ್ರಗತಿಯನ್ನು ಸಾಧಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

44. ಸದರಿ ಯೋಜನೆಯಡಿ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಯೋಜನೆಯ ಅನುಷ್ಠಾನದಲ್ಲಿ ಬಹು ಮುಖ್ಯ ಪಾತ್ರವಿರುವ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರು

ಸರಿಯಾದ ರೀತಿಯಲ್ಲಿ ಮೇಲುಸ್ತುವಾರಿ ಮಾಡಿ ಕಾರ್ಯಪಾಲಕ ಅಭಿಯಂತರರುಗಳಿಗೆ ಸೂಕ್ತ ಸಲಹೆ ಮಾರ್ಗದರ್ಶನ ನೀಡಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಕ್ರಮವಹಿಸುವುದು.

ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಯೋಜನೆ

45. ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಯೋಜನೆಗೆ ಲಿಂಕ್ ಡಾಕ್ಯೂಮೆಂಟ್ ಪ್ರಕಾರ ಮತ್ತು ಶಾಸಕರ ಅಧ್ಯಕ್ಷತೆಯ ಟಾಸ್ಕ್ ಫೋರ್ಸ್ ಸಮಿತಿಗೆ ಈಗಾಗಲೇ ಜಿಲ್ಲಾ ಪಂಚಾಯತಿಗಳಿಗೆ ನಿಗದಿಯಾಗಿರುವ ಅನುದಾನದಕ್ಕೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗಳನ್ನು ತಯಾರಿಸಿ ಅನುಮೋದನೆ ಪಡೆದು ಕಾಮಗಾರಿಗಳ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವುದು.

46. ಕ್ರಿಯಾ ಯೋಜನೆ ಅನುಮೋದನೆಯಾಗಿರುವ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು.

ನಬಾರ್ಡ್ ಕೆರೆಗಳು.

47. ನಬಾರ್ಡ್ ಯೋಜನೆಯಡಿ ಈಗಾಗಲೇ ಅನುಮೋದನೆ ಪಡೆದು ಆಯ್ಕೆಯಾಗಿರುವ ಸಣ್ಣ ಕೆರೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ ನಿಗದಿಪಡಿಸಿರುವ ಅನುದಾನವನ್ನು ಸಕಾಲದಲ್ಲಿ ಬಳಸಿಕೊಂಡು ಮರುಪಾವತಿ ಕ್ಲೈಂ ಗಳನ್ನು ನಬಾರ್ಡ್ ಸಂಸ್ಥೆಗೆ ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

**(ಕ್ರಮ : ನಿರ್ದೇಶಕರು/ ಮುಖ್ಯ ಇಂಜಿನಿಯರ್, ಪಿಆರ್ಇಡಿ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

ಸಾಮಾಜಿಕ ಲೆಕ್ಕ ಪರಿಶೋಧನೆ.

48. ಸಾಮಾಜಿಕ ಲೆಕ್ಕ ಪರಿಶೋಧನೆ ವರದಿಯಲ್ಲಿ ನಮೂದಿಸಿರುವ ಮೊತ್ತದ ವಸೂಲಾತಿಗೆ ಕ್ರಮವಹಿಸಲು ಹಾಗೂ ಸಾಮಾಜಿಕ ಲೆಕ್ಕ ಪರಿಶೋಧನಾ ವರದಿಗಳ ಮೇಲೆ ಅನುಪಾಲನಾ ವರದಿಗಳನ್ನು ಸಲ್ಲಿಸಲು ಸೂಚಿಸಲಾಯಿತು.

49. ಕಾಮಗಾರಿಗಳ ದಾಖಲಾತಿಗಳನ್ನು ಒದಗಿಸಲು ಹಾಗೂ ನಿಗದಿತ ದಿನಾಂಕಗಳಂದು ಸಾಮಾಜಿಕ ಲೆಕ್ಕ ಪರಿಶೋಧನಾ ಗ್ರಾಮ ಸಭೆಗಳನ್ನು ನಡೆಸಲು ಕ್ರಮ.

**(ಕ್ರಮ : ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

ಕರ್ನಾಟಕ ರಾಜ್ಯ ರಾಷ್ಟ್ರೀಯ ಜೀವನೋಪಾಯ ಸಂಸ್ಥೆ (ಎನ್.ಆರ್.ಎಲ್.ಎಂ)

50. ಕರ್ನಾಟಕ ರಾಜ್ಯ ರಾಷ್ಟ್ರೀಯ ಜೀವನೋಪಾಯ ಸಂಸ್ಥೆ (ಎನ್.ಆರ್.ಎಲ್.ಎಂ) ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಗ್ರಾಮೀಣ ಜನತೆಗೆ ಜೀವನೋಪಾಯ ಕಲ್ಪಿಸಲು ವಿಫುಲ ಅವಕಾಶಗಳಿದ್ದು, ಜನತೆಗೆ ಈ ಬಗ್ಗೆ ಅರಿವು ಮೂಡಿಸುವಲ್ಲಿ ಕಾರ್ಯ ನಿರ್ವಹಿಸಬೇಕಾಗಿದೆ ಎಂದು ಮಾನ್ಯ ಸಚಿವರು ಸಲಹೆ ನೀಡಿದರು.

51. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸದರಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಜಿಲ್ಲಾ ಪಂಚಾಯತಿಗಳ ಎಲ್ಲಾ ಯೋಜನಾ ನಿರ್ದೇಶಕರಗಳೊಂದಿಗೆ ಸಭೆಗಳನ್ನು ಆಯೋಜಿಸಿ ಮಾರ್ಗದರ್ಶನ ನೀಡುವುದು.

52. ಸದರಿ ಯೋಜನೆಗೆ ಸಂಬಂಧಿಸಿದ ಪ್ರಗತಿ ವಿವರಗಳನ್ನು ಪ್ರತಿ ಮಾಹೆ ಐದನೇ ತಾರೀಖಿನೊಳಗೆ ಎಂ.ಐ.ಎಸ್ ಹಾಗೂ ಎಂ.ಪಿ.ಆರ್ ತಂತ್ರಾಂಶಗಳಲ್ಲಿ ಅಳವಡಿಸುವುದು. ಪ್ರಗತಿ ವಿವರಗಳನ್ನು ಸದರಿ ತಂತ್ರಾಂಶದಲ್ಲಿ ಅಳವಡಿಸದೇ ಇದ್ದಲ್ಲಿ ಭಾರತ ಸರ್ಕಾರದಿಂದ ಅನುದಾನ ಪಡೆಯುವಲ್ಲಿ ಸಮಸ್ಯೆ ಉದ್ಭವಿಸುವುದು ಎಂದು ತಿಳಿಸಲಾಯಿತು.

**(ಕ್ರಮ : ವ್ಯವಸ್ಥಾಪಕ ನಿರ್ದೇಶಕರು, ಎನ್‌ಆರ್‌ಎಲ್‌ಎಂ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)**

ಸಾಮಾನ್ಯ ವಿಷಯಗಳು:

53. ಯೋಜನಾ ಇಲಾಖೆಯವರು ಸೃಜಿಸಿರುವ ಡಿ.ಎಸ್.ಎಸ್. ತಂತ್ರಾಂಶದಲ್ಲಿ ಜಿಲ್ಲಾ ವಲಯದ ಲಿಂಕ್ ಡಾಕ್ಯುಮಂಟ್‌ನ ಅನುಸಾರ ಯೋಜನೆಗಳ ಪ್ರಗತಿಯನ್ನು ಇಂಧೀಕರಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಈಗಾಗಲೇ ತರಬೇತಿಯನ್ನು ನೀಡಲಾಗಿದ್ದು, ಹಿಂದಿನ ವಿಡಿಯೋ ಸಂವಾದಗಳಲ್ಲಿ ಕೆಲವು ಜಿಲ್ಲೆಗಳಲ್ಲಿ ಎಲ್ಲಾ ಯೋಜನೆಗಳಿಗೂ ಗುರಿ ಮತ್ತು ಸಾಧನೆಯ ವಿವರಗಳನ್ನು ಇಂದೀಕರಿಸದೆ ಇರುವ ಬಗ್ಗೆ ಪ್ರಧಾನ ಕಾರ್ಯದರ್ಶಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

54. ಜಿಲ್ಲಾವಾರು ಯೋಜನಾವಾರು 2018-19 ನೇ ಸಾಲಿನಲ್ಲಿ ಲಿಂಕ್ ಡಾಕ್ಯುಮೆಂಟ್ ಪ್ರಕಾರ ಡಿಎಸ್‌ಎಸ್ ತಂತ್ರಾಂಶದಲ್ಲಿ ಪ್ರಗತಿ ದಾಖಲಾತಿ ವಿವರಗಳನ್ನು ಸಭೆಯಲ್ಲಿ ವಿತರಿಸಲಾಗಿದ್ದು, ಈವರೆಗೆ ಮಾಹೆವಾರು ಗುರಿಗಳನ್ನು ದಾಖಲಿಸಿದ ಜಿಲ್ಲೆಗಳು ಕೂಡಲೆ ಕ್ರಮವಹಿಸಲು ಹಾಗೂ ಪ್ರಗತಿಯನ್ನು ಪ್ರತಿ ಮಾಹೆ ದಾಖಲಿಸಿರುವುದನ್ನು ಖುದ್ದಾಗಿ ಪರಿಶೀಲಿಸಲು ಕ್ರಮ ವಹಿಸುವುದು. ದಾಖಲಾತಿಯಲ್ಲಿ ಸಮಸ್ಯೆಗಳಿದ್ದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ನಿರ್ದೇಶಕರು, ಯೋ.ಉ.ಮಾ ಹಾಗೂ ಯೋಜನಾ ಇಲಾಖೆಯ ತಾಂತ್ರಿಕ ಸಿಬ್ಬಂದಿ ವರ್ಗದವರನ್ನು ಸಂಪರ್ಕಿಸಿ ತಾಂತ್ರಿಕ ಸಮಸ್ಯೆಯನ್ನು ಬಗೆಹರಿಸಿಕೊಂಡು ತಂತ್ರಾಂಶದಲ್ಲಿ ಸಂಪೂರ್ಣ ಮಾಹಿತಿ ಲಭ್ಯವಿರುವ ಹಾಗೆ ಕ್ರಮವಹಿಸಲು ಸೂಚಿಸಿದರು.
(ಕ್ರಮ: ನಿರ್ದೇಶಕರು, ಯೋಉಮಾ ಶಾಖೆ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

55. District Development Co-ordination and Monitoring Committee – (DISHA) – ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳಡಿ ಸಾಧಿಸಿದ ಪ್ರಗತಿ ಪರಿಶೀಲನೆಗೆ ಸಂಬಂಧಿಸಿದಂತೆ ಸಭೆಗಳನ್ನು ನಿಯಮಿತವಾಗಿ ನಡೆಸಲು ಹಾಗೂ ಅದರ ನಡವಳಿಗಳನ್ನು ಜಾಲತಾಣ ಅಳವಡಿಸಲು ಕ್ರಮ ಕೈಗೊಳ್ಳುವುದು.

(ಕ್ರಮ: ನಿರ್ದೇಶಕರು, ಯೋಉಮಾ ಶಾಖೆ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

56. ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ.

(ಕ್ರಮ: ಉಪ ಕಾರ್ಯದರ್ಶಿಗಳು– ಆಡಳಿತ ಶಾಖೆ)

ಮೇಲ್ಕಂಡ ಎಲ್ಲಾ ಅಂಶಗಳಡಿ ಅಗತ್ಯ ಕ್ರಮ ಕೈಗೊಂಡು ಅನುಪಾಲನಾ ವರದಿಯನ್ನು ಸಂಬಂಧಪಟ್ಟ ಶಾಖೆಯ ನಿರ್ದೇಶಕರು/ಮುಖ್ಯಸ್ಥರುಗಳಿಗೆ ನಡವಳಿ ತಲುಪಿದ ಒಂದು ವಾರದೊಳಗೆ ಸಲ್ಲಿಸಲು ಸೂಚಿಸಿ ಸಭೆ ವಂದನೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

(ಕೃಷ್ಣ ಬೈರೇಗೌಡ)
ಸಚಿವರು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ.

ಸಂಖ್ಯೆ: ಗ್ರಾಅಪ/62/ಯೋಉಮಾ/2018 ದಿನಾಂಕ: 05.10.2018

ಇವರಿಗೆ :

1. ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಉಪ ಕಾರ್ಯದರ್ಶಿಗಳು (ಅಭಿವೃದ್ಧಿ)
2. ಆಯುಕ್ತರು, ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ.
3. ಆಯುಕ್ತರು, ಕ.ಗ್ರಾ.ನೀ.ಸ. & ನೈರ್ಮಲ್ಯ ಇಲಾಖೆ.
4. ಅಭಿಯಾನ ನಿರ್ದೇಶಕರು, ಎನ್.ಆರ್.ಎಲ್.ಎಮ್.
5. ನಿರ್ದೇಶಕರು, ಪಂಚಾಯತ್ ರಾಜ್– 1.
6. ನಿರ್ದೇಶಕರು, ಪಂಚಾಯತ್ ರಾಜ್–2.
7. ನಿರ್ದೇಶಕರು, ಸ್ವ.ಉ.ಕಾ.
8. ನಿರ್ದೇಶಕರು, ಗ್ರಾಮ ವಿಕಾಸ.
9. ನಿರ್ದೇಶಕರು, ಇ–ಆಡಳಿತ.
10. ಆಂತರಿಕ ಆರ್ಥಿಕ ಸಲಹೆಗಾರರು.
11. ಮುಖ್ಯಸ್ಥರು, ಗ್ರಾಮ ಸ್ವರಾಜ್ ಯೋಜನೆ.

12. ಮುಖ್ಯ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ.
13. ಮುಖ್ಯ ಇಂಜಿನಿಯರ್, ಪಂ.ರಾಜ್ ಇಂ.ಇಲಾಖೆ, ಬೆಂಗಳೂರು.
14. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ.
15. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಅಭಿವೃದ್ಧಿ ನಿಗಮ, ಬೆಂಗಳೂರು.
16. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ.
17. ಕಾರ್ಯನಿರ್ವಾಹಕ ನಿರ್ದೇಶಕರು, ಎಂ.ಜಿ.ಐ.ಆರ್.ಇ.ಡಿ.
18. ಅಪರ ನಿರ್ದೇಶಕರು, ಎಸ್.ಬಿ.ಎಮ್.
19. ಜಂಟಿ ನಿರ್ದೇಶಕರು, ರಸ್ತೆ ಮತ್ತು ಸೇತುವೆ.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರಧ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.